**ಪಿ.ಡಬ್ಲ್ಯೂ- 1**

ದೂರುದಾರರು ಒಂದು ಜ್ಞಾಪನೆಯನ್ನು ಸಲ್ಲಿಸಿ ತಾವು ಈ ಹಿಂದೆ ನ್ಯಾಯಾಲಯಕ್ಕೆ ಸಲ್ಲಿಸಿರುವ ತಮ್ಮ ಪ್ರಾಮಾಣೀಕೃತ ಹೇಳಿಕೆಯ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನಾಗಿ ಪರಿಗಣಿಸಲು ಕೋರಿರುತ್ತಾರೆ. ಮಾನ್ಯ ಸರ್ವೋಚ್ಛ ನ್ಯಾಯಾಲಯದ ತೀರ್ಪಿಗೆ ಅನುಗುಣವಾಗಿ ಪ್ರಾಮಾಣೀಕೃತ ಹೇಳಿಕೆಯ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಪ್ರಮಾಣ ಪತ್ರವೆಂದು ಪರಿಗಣಿಸಲು ಯಾವುದೇ ಬಾಧಕ ಇರುವುದಿಲ್ಲ. ಆದ್ದರಿಂದ ಫಿರ್ಯಾದಿಯ ಕೋರಿಕೆಯನ್ನು ಮನ್ನಿಸಿ ಪ್ರಾಮಾಣೀಕೃತ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಪ್ರಮಾಣ ಪತ್ರವೆಂದು ಪರಿಗಣಿಸಲಾಯಿತು.

ಸಾಕ್ಷಿಯು ದಿನಾಂಕ- **27-09-2023** ರಂದು ವಿಚಾರಣೆಗಾಗಿ ಹಾಜರಾಗಿದ್ದು ಅವರಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ- ದೂರುದಾರರ ಪರ ಶ್ರೀ ವಕೀಲರಿಂದ -

ಸಾಕ್ಷಿಯು ಆರೋಪಿ ನೀಡಿರುವ ಚೆಕ್ ನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- **1** ಎಂದು, ಅದರಲ್ಲಿರುವ ಆರೋಪಿಯ ಸಹಿಯನ್ನು ನಿ.ಪಿ.- **1-ಎ** ಎಂದು, ಬ್ಯಾಂಕಿನ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- **2** ಎಂದು, ದಿನಾಂಕ- **20-04-2021** ರಂದು ಆರೋಪಿಗೆ ನೀಡಿರುವ ಲೀಗಲ್ ನೋಟಿಸ್ಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- **3** ಎಂದು, ಅಂಚೆ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- **4** ಎಂದು, ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- **5** ಎಂದು, ದಿಃ **26-04-2021** ರಂದು ನೀಡಿರುವ ರಿಪ್ಲೈ ನೋಟೀಸ್ ನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- **6** ಎಂದು, ದಿಃ **07-06-2021** ರಂದು ನೀಡಿರುವ ರಿಪ್ಲೈ ನೋಟೀಸ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- **7** ಎಂದು, ದಿಃ **20-03-2021** ರ ಅಕ್ನಾಲೆಡ್ಜ್ಮೆಂಟ್ ನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- **8** ಎಂದು, ಸುಕೋ ಬ್ಯಾಂಕ್ ಪಾಸ್ ಬುಕ್ ನ ಮೊದಲನೇ ಪುಟದ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು

ಅದನ್ನು ನಿ.ಪಿ.- 9 ಎಂದು ಗುರುತಿಸಲಾಯಿತು. ಆದ್ದರಿಂದ ಆರೋಪಿ ವಿರುದ್ಧ ಸೂಕ್ತ ಕಾನೂನು ಕ್ರಮವನ್ನು ತೆಗೆದುಕೊಳ್ಳಬೇಕೆಂದು ಕೇಳಿಕೊಳ್ಳುತ್ತೇನೆ.

(ಆರೋಪಿ ಪರ ವಕೀಲರು ಪಾಟೀಸವಾಲಿಗಾಗಿ ಸಮಯಾವಕಾಶವನ್ನು ಕೇಳಿದ್ದು ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.)

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಅಪರ ಸಿವಿಲ್ ನ್ಯಾಯಾಲಯ
ಮತ್ತು ಪ್ರ. ದ. ನ್ಯಾ ದಂ.ಗಳು, ಹೊಸಪೇಟೆ.